# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 674 |
| ಮಾನ್ಯ ಸದಸ್ಯರ ಹೆಸರು | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13/12/2024 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾರ್ಮಿಕರ ನೋಂದಣಿಯ ನಿಯಮಗಳು ಯಾವುವು; ಪ್ರಸ್ತುತ ಕರ್ನಾಟಕ ರಾಜ್ಯದಲ್ಲಿ ಎಷ್ಟು ಜನ ನೋಂದಾಯಿತ ಕಾರ್ಮಿಕರು ಇದ್ದಾರೆ; ಕಾರ್ಮಿಕ ವ್ಯಾಖ್ಯಾನ ದಿಂದ ಹೊರಗುಳಿದ ಕೆಲಸ ಗಾರರನ್ನು ಕಾರ್ಮಿಕ ವ್ಯಾಪ್ತಿಗೆ ಸೇರ್ಪಡೆಗೊಳಿಸಲು ಸರಕಾರ ಯಾವ ರೀತಿ ಕ್ರಮವಹಿಸುತ್ತಿದೆ; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳು ಕಾರ್ಮಿಕರ ಕಲ್ಯಾಣಕ್ಕಾಗಿ ಹಲವಾರು ರೀತಿಯ ಸಾಮಾಜಿಕ ಭದ್ರತೆ & ಕಲ್ಯಾಣ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ಸದರಿ ಯೋಜನೆಗಳಿಗೆ ಸಂಬಂಧಿಸಿದಂತೆ ಅರ್ಹ ಫಲಾನುಭವಿಗಳಿಗೆ ಇರಬೇಕಾದ ಅರ್ಹತೆಗಳು ಹಾಗೂ ಮಾನದಂಡಗಳ ಕುರಿತಾಗಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ. ಕಾರ್ಮಿಕರ ನೋಂದಣಿಗೆ ಇರಬೇಕಾದ ನಿಯಮಗಳು ಹಾಗೂ ಮಾನದಂಡಗಳು ಹಾಗೂ ಇದುವರೆಗೆ ನೋಂದಣಿಯಾಗಿರುವ ಕಾರ್ಮಿಕರ ವಿವರಗಳನ್ನೊಳಗೊಂಡ ಮಾಹಿತಿ ಈ ಕೆಳಕಂಡಂತಿರುತ್ತದೆ.<br><br>**<u>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br><br>ಈ ಮಂಡಳಿಯಲ್ಲಿ ಕಾರ್ಮಿಕರನ್ನು ಫಲಾನುಭವಿಗಳಾಗಿ ನೋಂದಣಿ ಮಾಡಲು ಈ ಕೆಳಕಂಡ ನಿಯಮಗಳನ್ನು ಅನುಸರಿಸಲಾಗುತ್ತಿದೆ.<br><br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996 ರ ಕಲಂ 12 ರ ಪ್ರಾವದಾನಗಳನ್ವಯ ನೋಂದಣಿ ಪೂರ್ವದ 12 ತಿಂಗಳ ಅವಧಿಯಲ್ಲಿ (ಒಂದು ವರ್ಷದಲ್ಲಿ) 90 ದಿನ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ 18-60ರ ವಯೋಮಾನದ ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಲು ಮಂಡಳಿಯ ತಂತ್ರಾಂಶ https://kbocwwb.karnataka.gov.in/login ಲಾಗಿನ್‌ನಲ್ಲಿ ನಿಗಧಿಪಡಿಸಿರುವ ಅರ್ಜಿಯನ್ನು ಭರ್ತಿಮಾಡಿ ನೋಂದಣಿ ಮಾಡಬಹುದಾಗಿದೆ. |

| | | |
|---|---|---|
| | | **ನೋಂದಣಿಗಾಗಿ ಸಲ್ಲಿಸಬೇಕಾದ ಅಗತ್ಯ ದಾಖಲೆಗಳು:**<br>ಎ) ಉದ್ಯೋಗ ಪ್ರಮಾಣ ಪತ್ರ: ಕಟ್ಟಡದ ಮಾಲೀಕರು / ಗುತ್ತಿಗೆದಾರರು, CREDAI (Confederation of Real Estate Developers Association of India), BAI (Builders Association of India) ಅಥವಾ ಕರ್ನಾಟಕ ಸ್ಟೇಟ್ ಕಾಂಟ್ರಾಕ್ಟರ್ ಅಸೋಸಿಯೇಷನ್ ನವರು ನಮೂನೆ - V(A) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ' ಅಥವಾ ನೋಂದಾಯಿತ ಕಾರ್ಮಿಕರ ಸಂಘಗಳು ನಮೂನೆ- V(B) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ' ಅಥವಾ ಕಾರ್ಮಿಕ ಅಧಿಕಾರಿ/ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರು ನಮೂನೆ- V(C) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ' ಅಥವಾ ಪಂಚಾಯತಿ ಅಭಿವೃದ್ಧಿ ಅಧಿಕಾರಿ / ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ನಮೂನೆ- V(D) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ.<br>ಬಿ) ಅರ್ಜಿದಾರರ ಬ್ಯಾಂಕ್ ಪುಸ್ತಕದ ಮುಖಪುಟದ ನಕಲು ಪ್ರತಿ<br>ಸಿ) ಅರ್ಜಿದಾರರು ಒಂದು ವರ್ಷದಲ್ಲಿ ಕನಿಷ್ಠ 90 ದಿನಗಳ ಕಾಲ ಕಟ್ಟಡ ಅಥವಾ ಇತರೆ ನಿರ್ಮಾಣ ಕಾಮಗಾರಿಯಲ್ಲಿ ಕೆಲಸ ನಿರ್ವಹಿಸಿದ ಬಗ್ಗೆ ಸ್ವಯಂ ಧೃಢೀಕರಣ ಪ್ರಮಾಣ ಪತ್ರ ಮತ್ತು ಲಭ್ಯವಿದ್ದಲ್ಲಿ ವೇತನ ಚೀಟಿ ಅಥವಾ ಹಾಜರಾತಿ ವಹಿ.<br>ಪ್ರಸ್ತುತ ರಾಜ್ಯದಲ್ಲಿರುವ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಖ್ಯೆಯ ಕುರಿತು ಮಂಡಳಿಯಲ್ಲಿ ಸಮೀಕ್ಷೆ ಕೈಗೊಂಡಿರುವುದಿಲ್ಲ. ಇಲ್ಲಿಯವರೆಗೆ ಮಂಡಳಿಯಲ್ಲಿ **30.73** ಲಕ್ಷ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಫಲಾನುಭವಿಗಳಾಗಿ ನೋಂದಣಿಯಾಗಿರುತ್ತಾರೆ.<br><br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ, 1996 ರ ಕಲಂ 2 (ಡಿ) ಹಾಗೂ 2 (ಇ ) ರಲ್ಲಿ "ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿ " ಮತ್ತು "ಕಟ್ಟಡ ಕಾರ್ಮಿಕರು" ಯಾರು ಎಂಬುದನ್ನು ನಿಗಧಿಪಡಿಸಲಾಗಿದ್ದು ಇದರನ್ವಯ ಎಲ್ಲಾ ಕಾರ್ಮಿಕರಿಗೂ ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಲು ಅವಕಾಶ ಕಲ್ಪಿಸಲಾಗಿರುತ್ತದೆ. |

**ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**: ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ನಿಗದಿಪಡಿಸಿದ ಅಸಂಘಟಿತ ವರ್ಗಗಳ ಕಾರ್ಮಿಕರನ್ನು ನೋಂದಾಯಿಸುತ್ತಿದ್ದು, ಯೋಜನಾವಾರು ನೋಂದಣಿಗೆ ಅನುಸರಿಸುತ್ತಿರುವ ನಿಯಮಗಳು ಈ ಕೆಳಗಿನಂತಿದೆ:

**1. ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ**:-

ಈಗಾಗಲೇ ಜಾರಿಯಲ್ಲಿದ್ದ, ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯನ್ನು ಪರಿಷ್ಕರಿಸಲಾಗಿದ್ದು, ಈ ಯೋಜನೆಯಡಿ 21 ಅಸಂಘಟಿತ ವರ್ಗಗಳಾದ "ಕ್ಷೌರಿಕರು, ಗೃಹ ಕಾರ್ಮಿಕರು, ಅಕ್ಕಸಾಲಿಗರು, ಹಮಾಲರು, ಕಮ್ಮಾರರು, ಚಿಂದಿ ಆಯುವವರು, ಟೈಲರ್ಸ್, ಮಂಡಕ್ಕಿ ಭಟ್ಟಿ ಕಾರ್ಮಿಕರು, ಕುಂಬಾರರು, ಅಗಸರು, ಬೀದಿಬದಿ ವ್ಯಾಪಾರಿಗಳು, ಸಿನಿ ಕಾರ್ಮಿಕರು, ಹೋಟೆಲ್ ಕಾರ್ಮಿಕರು, ಫೋಟೋಗ್ರಾಫರ್ಸ್, ನೇಕಾರರು, ಬೀಡಿ ಕಾರ್ಮಿಕರು, ಸ್ವತಂತ್ರ ಲೇಖನ ಬರಹಗಾರರು, ಕಲ್ಯಾಣ ಮಂಟಪ/ ಸಭಾ ಭವನ/ ಟೆಂಟ್/ ಪೆಂಡಾಲ್‌ಗಳ ಕೆಲಸ ನಿರ್ವಹಿಸುವ ಎಲ್ಲಾ ಕಾರ್ಮಿಕರು, ಅಸಂಘಟಿತ ವಿಕಲಚೇತನ ಕಾರ್ಮಿಕರು, ಅಲೆಮಾರಿ ಪಂಗಡಕ್ಕೆ ಸೇರಿದ ಅಸಂಘಟಿತ ಕಾರ್ಮಿಕರು, ಹಗ್ಗ ಸಿದ್ಧಪಡಿಸುವ (ಭೈಜಂತ್ರಿ)" ಕಾರ್ಮಿಕರನ್ನು ನೋಂದಾಯಿಸಿ ಗುರುತಿನ ಚೀಟಿ ವಿತರಿಸಲಾಗುತ್ತಿದೆ.

**ಮಾನದಂಡಗಳು:**

- ಈ ಯೋಜನೆಯು ಕರ್ನಾಟಕ ರಾಜ್ಯದ ನಿವಾಸಿಗಳಿಗೆ ಮಾತ್ರ ಅನ್ವಯವಾಗುತ್ತದೆ.
- ಅರ್ಜಿದಾರರ ವಯೋಮಿತಿ 18 ರಿಂದ 60 ವರ್ಷಗಳು.
- ಆದಾಯ ತೆರಿಗೆ ಪಾವತಿದಾರರಾಗಿರಬಾರದು.
- ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರಬಾರದು.

**(2) ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ:-**

ಈ ಯೋಜನೆಯಡಿ ಸ್ವಿಗ್ಗಿ, ಜೊಮ್ಯಾಟೋಗಳಂತಹ ಸಂಸ್ಥೆಗಳಲ್ಲಿ ಫುಡ್‌ಡೆಲಿವರಿ ಮಾಡುವ ಹಾಗೂ ಇ-ಕಾಮರ್ಸ್ ಸಂಸ್ಥೆಗಳಾದ ಅಮೆಜಾನ್, ಫ್ಲಿಫ್‌ಕಾರ್ಟ್, ಬಿಗ್‌ಬಾಸ್ಕೆಟ್, ಪೋರ್ಟರ್, ಫಾರ್ಮಸಿ, ಬ್ಲಿಂಕಿಟ್, ಜೆಪ್ಟೋ, ಬಿಗ್ ಬಾಸ್ಕೆಟ್,

ಡಾಮಿನೋಜ್ ನಂತ ಮುಂತಾದ ಸಂಸ್ಥೆಗಳಲ್ಲಿ ಡೆಲಿವರಿ ವೃತ್ತಿಯಲ್ಲಿ ತೊಡಗಿಕೊಂಡ ಎಲ್ಲಾ ಅಸಂಘಟಿತ ಗಿಗ್ ಕಾರ್ಮಿಕರನ್ನು ನೋಂದಾಯಿಸಿ ಗುರುತಿನ ಚೀಟಿ ನೀಡಲಾಗುತ್ತಿದೆ.

**ಮಾನದಂಡಗಳು.**

- 18 ರಿಂದ 60 ವಯೋಮಾನದವರಾಗಿರಬೇಕು.
- ಆದಾಯ ತೆರಿಗೆ ಪಾವತಿದಾರರಾಗಿರಬಾರದು.
- ಭವಿಷ್ಯನಿಧಿ ಹಾಗೂ ಇ.ಎಸ್.ಐ ಫಲಾನುಭವಿಯಾಗಿರಬಾರದು.
- ಕರ್ನಾಟಕದಲ್ಲಿ ಗಿಗ್ ವೃತ್ತಿ (ಡೆಲಿವರಿ ಕಾರ್ಯ) ನಿರ್ವಹಿಸುತ್ತಿರು ವವರಿಗೆ ಮಾತ್ರ.

**(3) ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ:-**

ಈ ಯೋಜನೆಯಡಿ ದಿನಪತ್ರಿಕಾ ವಿತರಣಾ ಕಾರ್ಮಿಕರನ್ನು ನೋಂದಾಯಿಸಿ ಗುರುತಿನ ಚೀಟಿ ನೀಡಲಾಗುತ್ತಿದೆ.

**ಮಾನದಂಡಗಳು.**

- ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
- 16 ರಿಂದ 70 ವಯೋಮಾನದವರಾಗಿರಬೇಕು.
- ಕೇಂದ್ರ ಸರ್ಕಾರದ ಇ-ಶ್ರಮ್ ಪೋರ್ಟಲ್‌ನಲ್ಲಿ "News Paper Boy" ಎಂಬ ವರ್ಗದಡಿ ನೋಂದಣಿಯಾಗಿರಬೇಕು.
- ಆದಾಯ ತೆರಿಗೆ ಪಾವತಿದಾರರಾಗಿರಬಾರದು. ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರಬಾರದು.

**(4) ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ:-**

ಈ ಮಂಡಳಿಯಲ್ಲಿ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರಾದ ಚಾಲಕ, ನಿರ್ವಾಹಕ, ಕ್ಲೀನರ್, ನಿಲ್ದಾಣ ಸಿಬ್ಬಂದಿ, ಮರುಪರಿಶೀಲನಾ ಸಿಬ್ಬಂದಿ, ಬುಕಿಂಗ್ ಗುಮಾಸ್ತ, ನಗದು ಗುಮಾಸ್ತ, ಡಿಪೋ ಗುಮಾಸ್ತ, ಸಮಯ ಸೂಚಕ, ಕಾವಲುಗಾರ ಅಥವಾ ಪರಿಚಾರಕ, ಮೋಟಾರು ಗ್ಯಾರೇಜ್ ಗಳಲ್ಲಿ ಟೈರ್ ಜೋಡಿಸುವ ಮತ್ತು ಬೇರ್ಪಡಿಸುವ ಘಟಕಗಳಲ್ಲಿ, ಪಂಚರ್ ದುರಸ್ತಿ ಮಳಿಗೆಗಳಲ್ಲಿ, ವೀಲ್ ಬ್ಯಾಲೆನ್ಸಿಂಗ್ ಮತ್ತು ಅಲೈನ್ಮೆಂಟ್ ಘಟಕಗಳಲ್ಲಿ, ನೀರಿನಿಂದ ಸ್ವಚ್ಛಗೊಳಿಸುವ ಘಟಕಗಳಲ್ಲಿ ಕೆಲಸ ಮಾಡುವ ವ್ಯಕ್ತಿ ಮತ್ತು ಮೋಟಾರು ವಾಹನ ಹೊರಕವಚ ನಿರ್ಮಾಣ

| | | |
|---|---|---|
| | | ಘಟಕಗಳಲ್ಲಿ, ಟಿಂಕರಿಂಗ್, ಎಲೆಕ್ಟ್ರಿಕಲ್ ಹಾಗೂ ಎಸಿ ಘಟಕ ಇತ್ಯಾದಿ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ. |

**ಮಾನದಂಡಗಳು**

- ಈ ಯೋಜನೆಯು ಕರ್ನಾಟಕ ರಾಜ್ಯಕ್ಕೆ ಮಾತ್ರ ಅನ್ವಯಿಸುತ್ತದೆ.
- ವಯೋಮಿತಿ 18 ರಿಂದ 60 ವರ್ಷಗಳು.
- ಆದಾಯ ತೆರಿಗೆ ಪಾವತಿದಾರರಾಗಿರಬಾರದು.
- ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರಬಾರದು.
- ಯೋಜನೆಯ ಸೌಲಭ್ಯಗಳು ಕರ್ತವ್ಯದಲ್ಲಿರುವಾಗ ಹಾಗೂ ಇಲ್ಲದಿರುವಾಗಲೂ ಸಹ ಲಭ್ಯವಾಗುತ್ತವೆ.

ಚಾಲಕರು, ಕರ್ನಾಟಕ ರಾಜ್ಯ ಸಾರಿಗೆ ಇಲಾಖೆಯಿಂದ ವಾಣಿಜ್ಯ ವಾಹನ ಚಲಾಯಿಸಲು ಊರ್ಜಿತ ಚಾಲನಾ ಪರವಾನಗಿಯನ್ನು ಹೊಂದಿರುವುದು ಕಡ್ಡಾಯ.

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳು, ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ ಹಾಗೂ ಕೇಂದ್ರ ಸರ್ಕಾರದ ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ವಿವರ ಈ ಕೆಳಕಂಡಂತಿದೆ.

| **ಯೋಜನೆಗಳು/ ಕಾರ್ಯಕ್ರಮ** | **ನೋಂದಾಯಿತ ಕಾರ್ಮಿಕರ ಸಂಖ್ಯೆ** |
|---|---|
| ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ | 21,58,568 |
| ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ | 23,799 |
| ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ | 6,047 |
| ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ | 4,15,332 |
| ಇ-ಶ್ರಮ್ ಕಾರ್ಯಕ್ರಮ | 1,02,84,362 |
| **ಒಟ್ಟು** | **1,28,88,108** |

| | | |
|---|---|---|
| | | ರಾಜ್ಯದಲ್ಲಿ ಕಾರ್ಮಿಕರನ್ನು ಸಂಘಟಿತ ಹಾಗೂ ಅಸಂಘಟಿತ ಕಾರ್ಮಿಕರೆಂದು ವಿಂಗಡಿಸಲಾಗಿದ್ದು, ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರದ ಹಾಗೂ ಆದಾಯ ತೆರಿಗೆ ಪಾವತಿದಾರರಾಗಿರದ ಎಲ್ಲಾ ಕಾರ್ಮಿಕರನ್ನು ಅಸಂಘಟಿತ ಕಾರ್ಮಿಕರೆಂದು ಪರಿಗಣಿಸಲಾಗುತ್ತಿದೆ.<br><br>ಪ್ರಸ್ತುತ 24 ವರ್ಗಗಳ ಅಸಂಘಟಿತ ಕಾರ್ಮಿಕರನ್ನು ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳ ವ್ಯಾಪ್ತಿಗೆ ಒಳಪಡಿಸಲಾಗಿದ್ದು, ಬಾಕಿ ಉಳಿದ ಅಸಂಘಟಿತ ವರ್ಗಗಳ ಕಾರ್ಮಿಕರನ್ನು ಹಂತ ಹಂತವಾಗಿ ಮುಂದಿನ ದಿನಗಳಲ್ಲಿ ಯೋಜನೆಯ ವ್ಯಾಪ್ತಿಗೆ ಒಳಪಡಿಸಲು ಉದ್ದೇಶಿಸಲಾಗಿದೆ.<br><br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br>ಈ ಮಂಡಳಿಯಲ್ಲಿ ಯಾವುದೇ ಸಂಘಟಿತ ಕಾರ್ಮಿಕರನ್ನು ನೊಂದಣಿ ಮಾಡಿಕೊಳ್ಳುವ ವ್ಯವಸ್ಥೆ ಇರುವುದಿಲ್ಲ, ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965 ರ ಸೆಕ್ಷನ್7(ಎ ) (2) ಅನ್ವಯ ರಾಜ್ಯದಲ್ಲಿರುವ ನೊಂದಾಯಿತ ಕಾರ್ಖಾನೆಗಳು ಹಾಗೂ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ 1961 ರಲ್ಲಿ ನೋಂದಾಯಿತವಾದ ಸಂಸ್ಥೆಗಳು, ಸೊಸೈಟಿ ಆಕ್ಟ್ 1960 ರಡಿಯಲ್ಲಿ ನೊಂದಾಯಿತವಾದ ಸಂಸ್ಥೆಗಳು, ಪ್ಲಾಂಟೇಷನ್‌ಕಾರ್ಯಗಾರಗಳು, ಮೋಟಾರ್ ಓಮಿನಿ ಬಸ್ ಸರ್ವೀಸ್ ನಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಡಿಸೆಂಬರ್ ಮಾಹೆಯ 31ನೇ ದಿನಾಂಕದಂದು ಹಾಜರಾತಿಯಲ್ಲಿ ಹೆಸರಿರುವ ಕಾರ್ಮಿಕರ ವೇತನದಿಂದ ರೂ.20/- ಹಾಗೂ ಮಾಲೀಕರಿಂದ ರೂ.40/- ಒಟ್ಟು ರೂ.60/- ಗಳನ್ನು ಮಂಡಳಿಯ ಖಾತೆಗೆ ವರ್ಗಾಯಿಸಲಾಗುತ್ತದೆ. ಮಂಡಳಿಗೆ ವಂತಿಕೆ ಪಾವತಿಸಿದ ಕಾರ್ಮಿಕರಿಗೆ ಹಾಗೂ ಅವರ ಅವಲಂಬಿತರಿಗೆ ಮಂಡಳಿಯಿಂದ ಅನುಷ್ಠಾನಗೊಳ್ಳುವ ಕಲ್ಯಾಣ ಯೋಜನೆಗಳಡಿ ಸೌಲಭ್ಯಗಳನ್ನು ನೀಡಲಾಗುತ್ತದೆ.<br><br>2023-24ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಿಂದ 5272212 ಕಾರ್ಮಿಕರು ಮಂಡಳಿಗೆ ವಂತಿಕೆ ಪಾವತಿಸಿರುತ್ತಾರೆ.<br><br>ಮಂಡಳಿಗಳ ವಿವಿಧ ಯೋಜನೆಗಳಡಿ ಹೊರಡಿಸಲಾಗಿರುವ ಮಾರ್ಗಸೂಚಿಗಳಲ್ಲಿ ತಿಳಿಸಿರುವ ಮಾನದಂಡಗಳು ಹಾಗೂ ಅರ್ಹತೆಗಳಿಗೆ ಹೊರತಾದ ಕಾರ್ಮಿಕರನ್ನು ಆಯಾ ಯೋಜನೆಗಳಡಿ ಫಲಾನುಭವಿಗಳನ್ನಾಗಿ ಪರಿಗಣಿಸಲು ಬರುವುದಿಲ್ಲ. |

| | | |
|---|---|---|
| | | **ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಯಲ್ಲಿ** ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಯು ಕಾರ್ಖಾನೆಗಳ ಕಾಯ್ದೆ 1948 ಅನ್ನು ಜಾರಿಗೊಳಿಸುತ್ತಿದ್ದು, ಅದರಡಿಯಲ್ಲಿ 18,341 ಕಾರ್ಖಾನೆಗಳು ನೋಂದಾವಣೆಯಾಗಿದ್ದು, ಕಾರ್ಖಾನೆಗಳಲ್ಲಿ ಒಟ್ಟು 18,13,292 ಕಾರ್ಮಿಕರು ಕೆಲಸ ನಿರ್ವಹಿಸುತ್ತಿರುತ್ತಾರೆ. |
| ಆ) | ರಾಜ್ಯಾದಾದ್ಯಂತ ಕಾರ್ಮಿಕರಿಗೆ ನೀಡಬೇಕಿರುವ ಸವಲತ್ತುಗಳು ಯಾವುವು; ಸರ್ಕಾರವೂ ಸೇರಿದಂತೆ ಕಾರ್ಮಿಕರನ್ನು ದುಡಿಸಿಕೊಳ್ಳುತ್ತಿರುವವರು ಕಾರ್ಮಿಕರಿಗೆ ಅಗತ್ಯ ಸವಲತ್ತುಗಳನ್ನು ನೀಡುತ್ತಿರುವ ಬಗ್ಗೆ ಹಾಗೂ ಸುರಕ್ಷತೆಯ ಮುಂಜಾಗ್ರತೆಗಳನ್ನು ವಹಿಸಿರುವುದರ ಬಗ್ಗೆ ಇಲಾಖೆ ಹೇಗೆ ಖಾತರಿಪಡಿಸಿಕೊಳ್ಳುತ್ತಿದೆ; | ರಾಜ್ಯಾದ್ಯಂತ ವಿವಿಧ ಕ್ಷೇತ್ರಗಳಲ್ಲಿ ದುಡಿಯುತ್ತಿರುವ ಕಾರ್ಮಿಕರಿಗೆ ಅನ್ವಯವಾಗುವ ವಿವಿದ ಕಾರ್ಮಿಕ ಕಾಯ್ದೆಗಳಡಿಯಲ್ಲಿ ನಿಗಧಿಪಡಿಸಿದ ಸವಲತ್ತುಗಳು ಮುಖ್ಯವಾಗಿ ಕುಡಿಯುವ ನೀರು, ಸ್ವಚ್ಛ ಕೆಲಸದ ಪರಿಸರ, ಕಾರ್ಮಿಕರ ಸಂಖ್ಯೆಗಳಿಗೆ ಅನುಗುಣವಾಗಿ ಕ್ಯಾಂಟೀನ್ ಸೌಲಭ್ಯ, ಶೌಚಾಲಯ, ಮಹಿಳಾ ಕಾರ್ಮಿಕರು ಇದ್ದಲ್ಲಿ ಶಿಶುಪಾಲನಾ ಕೇಂದ್ರಗಳು, ಪ್ರಥಮ ಚಿಕಿತ್ಸೆ ಮೊದಲಾದ ಸವಲತ್ತುಗಳನ್ನು ನೀಡಲಾಗುತ್ತಿದೆ. ಅಲ್ಲದೆ, ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಟ್ಟಡ & ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಾಯಿತ ಫಲಾನುಭವಿಗಳಿಗೆ ಹಾಗೂ ಅವರ ಅವಲಂಭಿತರಿಗಾಗಿ ವಿವಿಧ ಬಗೆಯ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಮತ್ತು ಕಲ್ಯಾಣ ಯೋಜನೆಗಳನ್ನು ರೂಪಿಸಲಾಗಿರುತ್ತದೆ. ಮಾಹಿತಿಯನ್ನು **ಅನುಬಂಧ-1** ರಲ್ಲಿ ಒದಗಿಸಿದೆ. ಅಲ್ಲದೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ವಿವಿಧ ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳು ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಿಸುವ ನಿಟ್ಟಿನಲ್ಲಿ ಸಹಾಯ ಧನದ ಮೊತ್ತವನ್ನು ಫಲಾನುಭವಿಗಳ ಖಾತೆಗೆ ನೇರವಾಗಿ ಡಿಬಿಟಿ ಮೂಲಕ ವರ್ಗಾಯಿಸಲಾಗುತ್ತಿದೆ. ಆದರಂತೆ ಬ್ಯಾಂಕ್ ಪಾಸ್ ಮೂಲಕ ಫಲಾನುಭವಿಗಳಿಗೆ ಸಹಾಯ ಧನ ತಲುಪಿರುವ ಬಗ್ಗೆ ಖಾತರಿ ಪಡಿಸಿಕೊಳ್ಳಲಾಗುತ್ತಿದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br><br>ಈ ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯ ಒದಗಿಸುವ ಈ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ವಿವರ ಈ ಕೆಳಗಿನಂತಿವೆ. |

| | | |
|---|---|---|
| | | **1. ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-**<br><br>ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ವಾಹನಗಳ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>**(ಅ) ಅಪಘಾತ ಪರಿಹಾರ:**<br><br>ಅಪಘಾತದಿಂದ ಮೃತರಾದ ಪ್ರಕರಣಗಳಲ್ಲಿ ಅವರ ನಾಮನಿರ್ದೇಶಿತರಿಗೆ ರೂ. 5 ಲಕ್ಷಗಳ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2 ಲಕ್ಷಗಳವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದ ವರೆಗೆ ಚಿಕಿತ್ಸಾ ವೆಚ್ಚ ಮರುಪಾವತಿ ಮಾಡಲಾಗುತ್ತಿದೆ.<br><br>**(ಆ) ಶೈಕ್ಷಣಿಕ ಧನ ಸಹಾಯ:**<br>ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಒಂದನೇ ತರಗತಿಯಿಂದ ಪದವಿಪೂರ್ವ ತರಗತಿಯವರೆಗೆ ವ್ಯಾಸಂಗ ಮಾಡಲು ವಾರ್ಷಿಕ ತಲಾ ರೂ.10,000/-ರಂತೆ ಶೈಕ್ಷಣಿಕ ಸಹಾಯ ಧನ ವಿತರಿಸಲಾಗುತ್ತಿದೆ.<br><br>**(2) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**<br><br>ಈಗಾಗಲೇ ಜಾರಿಯಲ್ಲಿದ್ದ, ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯನ್ನು ಪರಿಷ್ಕರಿಸಲಾಗಿದ್ದು, ಈ ಯೋಜನೆಯಡಿ 21 ಅಸಂಘಟಿತ ವರ್ಗಗಳಾದ "ಕ್ಷೌರಿಕರು, ಗೃಹ ಕಾರ್ಮಿಕರು, ಅಕ್ಕಸಾಲಿಗರು, ಹಮಾಲರು, ಕಮ್ಮಾರರು, ಚಿಂದಿ ಆಯುವವರು, ಟೈಲರ್ಸ್, ಮಂಡಕ್ಕಿ ಭಟ್ಟಿ ಕಾರ್ಮಿಕರು, ಕುಂಬಾರರು, ಅಗಸರು, ಬೀದಿಬದಿ ವ್ಯಾಪಾರಿಗಳು, ಸಿನಿ ಕಾರ್ಮಿಕರು, ಹೋಟೆಲ್ ಕಾರ್ಮಿಕರು, ಫೋಟೋಗ್ರಾಫರ್ಸ್, ನೇಕಾರರು, ಬೀಡಿ ಕಾರ್ಮಿಕರು, ಸ್ವತಂತ್ರ ಲೇಖನ ಬರಹಗಾರರು, ಕಲ್ಯಾಣ ಮಂಟಪ/ ಸಭಾ ಭವನ/ ಟೆಂಟ್/ ಪೆಂಡಾಲ್‌ಗಳ ಕೆಲಸ ನಿರ್ವಹಿಸುವ ಎಲ್ಲಾ ಕಾರ್ಮಿಕರು, ಅಸಂಘಟಿತ ವಿಕಲಚೇತನ ಕಾರ್ಮಿಕರು, ಅಲೆಮಾರಿ ಪಂಗಡಕ್ಕೆ ಸೇರಿದ ಕಾರ್ಮಿಕರು, ಹಗ್ಗ ಸಿದ್ಧಪಡಿಸುವವರು (ಭೈಜಂತ್ರಿ)" ಕಾರ್ಮಿಕರನ್ನು "ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ"ಯಡಿ ಕಾರ್ಮಿಕರನ್ನು ನೋಂದಾಯಿಸಿ |

ಗುರುತಿನ ಚೀಟಿ ವಿತರಿಸಲಾಗುತ್ತಿದ್ದು, ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

**(ಅ) ಅಪಘಾತ ಪರಿಹಾರ ಸೌಲಭ್ಯ**

1. ಮರಣ ಪ್ರಕರಣ _ ರೂ. 1.00 ಲಕ್ಷದವರೆಗೆ ಅಪಘಾತ ಪರಿಹಾರ.
2. ಅಪಘಾತದಿಂದುಟಾಗುವ ಸಂಪೂರ್ಣ ಶಾಶ್ವತ/ ಭಾಗಶಃ ದುರ್ಬಲತೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ) - ರೂ. 1.00 ಲಕ್ಷದವರೆಗೆ ಪರಿಹಾರ.
3. ಆಸ್ಪತ್ರೆ ವೆಚ್ಚ ಮರುಪಾವತಿ - ರೂ. 50,000/- ಗಳವರೆಗೆ.

[

**(ಆ) ಸಹಜ ಮರಣ ಪರಿಹಾರ (ಅಂತ್ಯಕ್ರಿಯೆ ಧನಸಹಾಯ)**

ನೋಂದಾಯಿತ ಫಲಾನುಭವಿಯು ವಯೋಸಹಜ/ ಖಾಯಿಲೆ/ ಅಕಾಲಿಕ ಅಥವಾ ಇನ್ನಿತರೆ ಕಾರಣಗಳಿಂದ ಮರಣ ಹೊಂದಿದಲ್ಲಿ ಫಲಾನುಭವಿಯ ಕುಟುಂಬದವರಿಗೆ ಅಂತ್ಯಕ್ರಿಯೆ ವೆಚ್ಚಕ್ಕಾಗಿ ರೂ. 10,000/-ಗಳ ಧನ ಸಹಾಯ ಸೌಲಭ್ಯ.

**(3) ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ:-**

ಈ ಯೋಜನೆಯಡಿ ನೋಂದಾಯಿತ ಪ್ಲಾಟ್ ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರಿಗೆ ಅಪಘಾದಿಂದ ಮರಣ ಹೊಂದಿದಲ್ಲಿ ರೂ. 2.00 ಲಕ್ಷಗಳ ಅಪಘಾತ ಪರಿಹಾರ ಹಾಗೂ ರೂ. 2.00 ಲಕ್ಷಗಳ ವಿಮಾ ಸೇರಿ ಒಟ್ಟು ರೂ.4.00 ಲಕ್ಷಗಳ ಪರಿಹಾರ ಒದಗಿಸಲಾಗುತ್ತಿದೆ. ಅಲ್ಲದೇ, ಅಪಘಾತದ ಕಾರಣ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ ಮತ್ತು ರೂ.1.00 ಲಕ್ಷದ ವರೆಗೆ ಆಸ್ಪತ್ರೆ ವೆಚ್ಚ ಮರುಪಾವತಿ ಮಾಡಲಾಗುತ್ತದೆ.

**(4) ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ:-**

ಈ ಯೋಜನೆಯಡಿ ಇ-ಶ್ರಮ್ ಪೋರ್ಟಲ್‌ನಲ್ಲಿ News Paper Boy ಎಂಬ ವರ್ಗದಡಿ ನೋಂದಾಯಿತ ದಿನಪತ್ರಿಕೆ ವಿತರಿಸುವ ಕಾರ್ಮಿಕರಿಗೆ ಅಪಘಾತದಿಂದ ಮರಣ ಹೊಂದಿದಲ್ಲಿ ರೂ.2.00 ಲಕ್ಷಗಳವರಗೆ, ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ) ಹಾಗೂ ಅಪಘಾತ/ ಮಾರಣಾಂತಿಕ ಕಾಯಿಲೆ/ ಗಂಭೀರ

ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷದ ಸೌಲಭ್ಯವನ್ನು ಒದಗಿಸಲಾಗುತ್ತಿದೆ ಹಾಗೂ ಸಹಜ ಮರಣ ಪ್ರಕರಣಗಳಲ್ಲಿ ರೂ. 10,000/- ಧನ ಸಹಾಯ ಒದಗಿಸಲಾಗುತ್ತಿದೆ.

**(5) ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ:-**

ಅಸಂಘಟಿತ ವರ್ಗದ ಕಾರ್ಮಿಕರಲ್ಲಿ ಖಾಸಗಿ ವಾಣಿಜ್ಯ ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಹಾಗೂ ಕಲ್ಯಾಣ ಸೌಲಭ್ಯಗಳನ್ನು ಒದಗಿಸಲು ಅಗತ್ಯವಿರುವ ಸಂಪನ್ಮೂಲ ಕ್ರೋಢೀಕರಣದ ಉದ್ದೇಶದಿಂದ, ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ವಿಧೇಯಕ, 2024ನ್ನು ಅಧಿಸೂಚಿಸಲಾಗಿದ್ದು, ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಲು ಪ್ರತ್ಯೇಕವಾಗಿ, "ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ"ಯನ್ನು ರಚಿಸಲಾಗಿರುತ್ತದೆ.

**ದೊರಕುವ ಸೌಲಭ್ಯಗಳು:**

**(ಅ) ಅಪಘಾತ ಪರಿಹಾರ ಸೌಲಭ್ಯ:**

- ಅಪಘಾತದಿಂದ ಫಲಾನುಭವಿಗಳು ನಿಧನರಾದಲ್ಲಿ, ನಾಮನಿರ್ದೇಶಿತರಿಗೆ ರೂ.5 ಲಕ್ಷಗಳ ಪರಿಹಾರ.
- ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ರೂ.2 ಲಕ್ಷಗಳ ವರೆಗೆ ಪರಿಹಾರ.
- ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿದಾಗ- ಆಸ್ಪತ್ರೆ ವೆಚ್ಚ ಮರುಪಾವತಿ ರೂ. 1.00 ಲಕ್ಷದವರೆಗೆ.

**(ಆ) ನೈಸರ್ಗಿಕ ಮರಣ ಪರಿಹಾರ ಹಾಗೂ ಅಂತ್ಯಸಂಸ್ಕಾರ ವೆಚ್ಚ:**

ಸಹಜ ಮರಣ ಹೊಂದಿದ ಫಲಾನುಭವಿಗಳ ಅವಲಂಬಿತರಿಗೆ ಅಂತ್ಯ ಸಂಸ್ಕಾರದ ವೆಚ್ಚವೂ ಸೇರಿದಂತೆ ರೂ.25,000/-ಗಳ ಪರಿಹಾರ.

**(ಇ) ಶೈಕ್ಷಣಿಕ ಧನಸಹಾಯ :**

**ನೋಂದಾಯಿತ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:**

- 12ನೇ ತರಗತಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.3,000/-
- ಪದವಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.5,500/-
- ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.8,000/-
- ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.11,000/-

**ಅಪಘಾತದಿಂದ ನಿಧನರಾದ/ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-**

- 1ನೇ ತರಗತಿಯಿಂದ ಪದವಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.10,000/-
- ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.20,000/-
- ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.25,000/-

**(ಈ) ಹೆರಿಗೆ ಸಹಾಯ ಧನ:**

ಫಲಾನುಭವಿಯ ಮೊದಲ ಎರಡು ಹೆರಿಗೆಗಳಿಗೆ ಮಾತ್ರ ಸೀಮಿತಗೊಂಡಂತೆ ತಲಾ ರೂ.10,000/-ಗಳು.

ಈ ಮಂಡಳಿಯ ಕಾರ್ಯ ವ್ಯಾಪ್ತಿಯಲ್ಲಿ ಈಗಾಗಲೇ ಅಸಂಘಟಿತ ಕಾರ್ಮಿಕರನ್ನು ಗುರುತಿಸಿ ನೋಂದಾಯಿಸಿ ಸವಲತ್ತುಗಳನ್ನು ನೀಡಲಾಗುತ್ತಿದೆ. ನೋಂದಣಿಯಾದ ಕಾರ್ಮಿಕರು ಸವಲತ್ತುಗಳಿಂದ ವಂಚಿತರಾದ ಪಕ್ಷದಲ್ಲಿ ಮಂಡಳಿಗೆ ಅರ್ಜಿಯನ್ನು ಸಲ್ಲಿಸಿ ಉಪಶಮನ ಪಡೆಯಬಹುದಾಗಿದೆ.

**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ</u>:**

ಈ ಮಂಡಳಿಯು ಸಂಘಟಿತ ಕಾರ್ಮಿಕರಿಂದ ರೂ.20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ.40/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಂದ ರೂ.20/- ರಂತೆ ವಂತಿಗೆಯಾಗಿ ಪಾವತಿಸಲಾಗುತ್ತಿದೆ. ಈ ವಂತಿಗೆಯ ಮೊತ್ತವನ್ನು ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರಿಗೆ ಕಲ್ಯಾಣ ಯೋಜನೆಗಳಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.

1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ
2) ಕಾರ್ಮಿಕರಿಗೆ ವೈದ್ಯಕೀಯ ನೆರವು
3) ಕಾರ್ಮಿಕರಿಗೆ ಅಪಘಾತ ಧನ ಸಹಾಯ
4) ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ
5)ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ
6)ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ
7)ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನ ಸಹಾಯ

ಮಂಡಳಿಗೆ ವಂತಿಕೆ ಪಾವತಿಸಿದ ಕಾರ್ಮಿಕರಿಗೆ ಹಾಗೂ ಅವರ ಅವಲಂಬಿತರಿಂದ ಆನ್‌ಲೈನ್ ನಲ್ಲಿ ಅರ್ಜಿಗಳನ್ನು ಆಹ್ವಾನಿಸಿ ಮಂಡಳಿಯಿಂದ ಪರಿಶೀಲಿಸಿ ಅವರ ಖಾತೆಗಳಿಗೆ ನೇರವಾಗಿ ಡಿ.ಬಿ.ಟಿ. ಮುಖಾಂತರ ಮೊತ್ತವನ್ನು ಪಾವತಿಸಲಾಗುತ್ತದೆ.

**ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ:**

ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಯು ಕಾರ್ಖಾನೆಗಳ ಕಾಯ್ದೆ 1948 ಅನ್ನು ಜಾರಿಗೊಳಿಸುತ್ತಿದ್ದು, ಅದರಡಿಯಲ್ಲಿ ನೋಂದಾಯಿತಗೊಂಡ ಕಾರ್ಖಾನೆಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರಿಗೆ ಸುರಕ್ಷತೆ, ಆರೋಗ್ಯ, ಕೆಲಸದ ಅವಧಿ, ವಾರದ ರಜೆ, ಹೆಚ್ಚುವರಿ ಕೆಲಸಕ್ಕೆ ದ್ವಿಗುಣ ವೇತನ, ರಜೆ ಸಂಬಳ ಮತ್ತು ಈ ಕೆಳಕಂಡ ಕಲ್ಯಾಣ ಸವಲತ್ತುಗಳನ್ನು ಕಾರ್ಖಾನೆಗಳ ಆಡಳಿತವರ್ಗದವರು ಕಾರ್ಮಿಕರಿಗೆ ಕೆಲಸದ ಸಮಯದಲ್ಲಿ ಒದಗಿಸಬೇಕಾಗಿರುತ್ತದೆ.

- ಕುಡಿಯುವ ನೀರು
- ಶೌಚಾಲಯ
- ಬಾಲವಾಡಿ (30 ಕ್ಕಿಂತ ಹೆಚ್ಚು ಮಹಿಳಾ ಕಾರ್ಮಿಕರು ಇದ್ದಲ್ಲಿ)
- ಊಟದ ಕೊಠಡಿ (150 ಕ್ಕಿಂತ ಹೆಚ್ಚು ಕಾರ್ಮಿಕರು ಇದ್ದಲ್ಲಿ)
- ಉಪಹಾರ ಗೃಹ (250 ಕ್ಕಿಂತ ಹೆಚ್ಚು ಕಾರ್ಮಿಕರು ಇದ್ದಲ್ಲಿ)
- ಕಲ್ಯಾಣಾಧಿಕಾರಿ ನೇಮಕಾತಿ (500 ಕ್ಕಿಂತ ಹೆಚ್ಚು ಕಾರ್ಮಿಕರು ಇದ್ದಲ್ಲಿ)
- ಆಂಬ್ಯುಲೆನ್ಸ್ ಕೊಠಡಿ (500 ಕ್ಕಿಂತ ಹೆಚ್ಚು ಕಾರ್ಮಿಕರು ಇದ್ದಲ್ಲಿ)
- ಆಂಬ್ಯುಲೆನ್ಸ್ ವಾಹನ (500 ಕ್ಕಿಂತ ಹೆಚ್ಚು

| | | |
|---|---|---|
| | | ಕಾರ್ಮಿಕರು ಇದ್ದಲ್ಲಿ)<br>❖ ವೈದ್ಯರು ಮತ್ತು ಅರೆವೈದ್ಯಕೀಯ ಸಿಬ್ಬಂದಿಗಳ ನೇಮಕಾತಿ (500 ಕ್ಕಿಂತ ಹೆಚ್ಚು ಕಾರ್ಮಿಕರು ಇದ್ದಲ್ಲಿ)<br>❖ ಸುರಕ್ಷತಾಧಿಕಾರಿ ನೇಮಕಾತಿ (1000 ಕ್ಕಿಂತ ಹೆಚ್ಚು ಕಾರ್ಮಿಕರು ಇದ್ದಲ್ಲಿ)<br>➢ ಕಾರ್ಖಾನೆಗಳನ್ನು ನೋಂದಾಯಿಸುವ ಸಮಯದಲ್ಲಿ ನಿಯಮಾನುಸಾರ ಸವಲತ್ತುಗಳನ್ನು ಒದಗಿಸಿರುವ ಕುರಿತಂತೆ ಖಾತರಿಪಡಿಸಿಕೊಂಡು ನೋಂದಾಯಿಸಲಾಗುತ್ತದೆ.<br>➢ ಕ್ಷೇತ್ರಾಧಿಕಾರಿಗಳು ತಮ್ಮ ದೈನಂದಿನ ಪರಿವೀಕ್ಷಾಯ ಸಮಯದಲ್ಲಿ ಕಾರ್ಮಿಕರಿಗೆ ಸವಲತ್ತುಗಳನ್ನು ನೀಡಿರುವ ಕುರಿತು ಪರಿಶೀಲಿಸಲಾಗುವುದು.<br><br>ಕಾರ್ಮಿಕರ ಸುರಕ್ಷತೆಯನ್ನು ಖಾತರಿಪಡಿಸಲು ಕಾರ್ಖಾನೆಗಳ ಕಾಯ್ದೆ ಹಾಗೂ ಅನ್ವಯಿಸುವ ವಿವಿಧ ಕಾರ್ಮಿಕ ಕಾಯ್ದೆಗಳಡಿ ನಿಗಧಿಪಡಿಸಿರುವ ಪ್ರಾವಧಾನಗಳನ್ನು ಜಾರಿಗೊಳಿಸಲಾಗುತ್ತಿದೆ. ಅಪಘಾತ ಸಂಭವಿಸಿದಲ್ಲಿ ಇಲಾಖೆಗೆ ವರದಿ ಮಾಡುವುದು ಖಡ್ಡಾಯವಾಗಿದ್ದು, ಕ್ಷೇತ್ರಾಧಿಕಾರಿಗಳು ನಿಯಮಾನುಸಾರ ತನಿಖೆ ನಡೆಸಿ ಕಾನೂನು ಕ್ರಮಗಳನ್ನು ಜಾರಿಗೊಳಿಸುತ್ತಿರುತ್ತಾರೆ. |
| ಇ) | ರಾಜ್ಯದಲ್ಲಿ ಇತ್ತೀಚೆಗೆ ಅತಿ ಹೆಚ್ಚು ಸಂಖ್ಯೆಯ ಹೊರ ರಾಜ್ಯದ ಹಾಗೂ ಉತ್ತರ ಭಾರತದ ಹೆಚ್ಚಿನ ಜನರು ಕಟ್ಟಡ ಕಾರ್ಮಿಕರಾಗಿ ಹಾಗೂ ಇತರ ಕಾರ್ಯಗಳಿಗಾಗಿ ಬರುತ್ತಿದ್ದು ಅವರನ್ನು ಕಾರ್ಮಿಕ ಇಲಾಖೆಯಲ್ಲಿ ನೋಂದಣಿ ಮಾಡಲು ಏನು ಕ್ರಮ ವಹಿಸಲಾಗಿದೆ; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಬಹುತೇಕ ವಲಸೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಕರ್ನಾಟಕ ರಾಜ್ಯದಲ್ಲಿ ಕೆಲಸ ನಿರ್ವಹಿಸುತ್ತಿರುವ ವಲಸೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಸಹ ಮಂಡಳಿಯ ಫಲಾನುಭವಿಗಳಾಗಿ ನೋಂದಾಯಿಸಲು ಈ ಕೆಳಕಂಡ ಕ್ರಮ ವಹಿಸಲಾಗುತ್ತಿದೆ.<br>ರಾಜ್ಯಾದ್ಯಂತ ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸದಲ್ಲಿ ತೊಡಗಿರುವ ವಲಸೆ ಕಾರ್ಮಿಕರ ಸಹಿತ ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಾಗಿ ನೋಂದಣಿ ಮಾಡಲು ಹಾಗೂ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವ ನಿಟ್ಟಿನಲ್ಲಿ ಈ ಕೆಳಕಂಡ ಕ್ರಮ ವಹಿಸಲಾಗುತ್ತಿದೆ.<br>1. ಕಟ್ಟಡ ಮತ್ತು ಇತರೆ ನಿರ್ಮಾಣ ಸ್ಥಳದಲ್ಲೇ ಕಾರ್ಮಿಕರನ್ನು ನೋಂದಾಯಿಸುವ ನಿಟ್ಟಿನಲ್ಲಿ ಬೆಂಗಳೂರು, ಮಂಗಳೂರು ಮತ್ತು ಮೈಸೂರು ಜಿಲ್ಲೆಗಳಲ್ಲಿ ದಿನಾಂಕ: 01-02-2024 ರಿಂದ 31-07-2024 ರವರೆಗೆ ಕಾರ್ಮಿಕ ಇಲಾಖೆಯ |

ಅಧಿಕಾರಿಗಳ ಸಹಯೋಗದೊಂದಿಗೆ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿರುತ್ತದೆ.

2. ನೋಂದಣಿ ಮತ್ತು ನವೀಕರಣಕ್ಕಾಗಿ ಪಾವತಿಸಬೇಕಾಗಿದ್ದ ಶುಲ್ಕವನ್ನು ಕೈಬಿಡಲಾಗಿದೆ.
3. ಸ್ವತಃ ಅರ್ಜಿದಾರರೇ ಆನ್‌ಲೈನ್ ಮೂಲಕ ನೋಂದಣಿಗಾಗಿ ಅರ್ಜಿ ಸಲ್ಲಿಸಲು ಹಾಗೂ ಸೌಲಭ್ಯಗಳ ವಿಲೇವಾರಿಗಾಗಿ ಅರ್ಜಿಸಲ್ಲಿಸಲು ಮಂಡಳಿಯಿಂದ ತಂತ್ರಾಂಶವನ್ನು ಅಭಿವೃದ್ಧಿಪಡಿಸಿ ಅವಕಾಶ ಕಲ್ಪಿಸಲಾಗಿದೆ.
4. ಕಾರ್ಮಿಕರು ಮಂಡಳಿಯ ನೋಂದಣಿ ಮತ್ತು ಸೌಲಭ್ಯಗಳ ಕುರಿತು ಮಾಹಿತಿಯನ್ನು ಪಡೆಯುವ ನಿಟ್ಟಿನಲ್ಲಿ 24/7 ಟೋಲ್ ಫ್ರೀ ನಂ. 155214 ನ ವ್ಯವಸ್ಥೆ ಕಲ್ಪಿಸಲಾಗಿದೆ.
5. ತಾಲ್ಲೂಕು ಮಟ್ಟದಲ್ಲಿ ಹಿರಿಯ ಕಾರ್ಮಿಕ ನಿರೀಕ್ಷಕರು/ ಕಾರ್ಮಿಕ ನಿರೀಕ್ಷಕರುಗಳನ್ನು ನೋಂದಣಾಧಿಕಾರಿಯಾಗಿ ನೇಮಕ ಮಾಡಲಾಗಿದೆ.
6. ನೋಂದಣಿ ಹಾಗೂ ಯೋಜನೆಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಲು ಈ ಕೆಳಕಂಡ ಮಾಹಿತಿ ಶಿಕ್ಷಣ ಸಂವಹನ (ಐಇಸಿ) ಕಾರ್ಯಕ್ರಮಗಳನ್ನು ಮಂಡಳಿಯ ವತಿಯಿಂದ ರಾಜ್ಯಾದಾದ್ಯಂತ ಹಮ್ಮಿಕೊಳ್ಳಲಾಗಿರುತ್ತದೆ.

ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಕಾಮಗಾರಿ ಸ್ಥಳಗಳಲ್ಲಿ ವರದಿಯಾದ ದುರ್ಘಟನೆಗಳ ಸಂಖ್ಯೆಯೆಷ್ಟು; ಅವುಗಳಲ್ಲಿ ಪ್ರಾಣ ಹಾನಿಯಾದ ಮತ್ತು ಇತರ ಗಾಯಾಳುಗಳು ಸಂಖ್ಯೆಯೆಷ್ಟು; ಸಂಬಂಧಪಟ್ಟ ಸಂತ್ರಸ್ತರಿಗೆ ಎಷ್ಟು ಮೊತ್ತದ ಪರಿಹಾರ ಧನವನ್ನು ನೀಡಲು ಕ್ರಮವಹಿಸಿದೆ?

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಕಟ್ಟಡ ಕಾಮಗಾರಿ ಸ್ಥಳಗಳಲ್ಲಿ ಅಪಘಾತ ಸಂಭವಿಸಿ ವರದಿಯಾದ ದುರ್ಘಟನೆ/ ಪ್ರಾಣ ಹಾನಿಯಾದ ಮತ್ತು ಇತರ ಗಾಯಾಳುಗಳ/ಪರಿಹಾರ ಮೊತ್ತದ ಮಾಹಿತಿಯು ಈ ಕೆಳಕಂಡಂತಿರುತ್ತದೆ.

| ವರ್ಷವಾರು | ದುರ್ಘಟನೆ/ ಪ್ರಾಣಾಹಾನಿ ಅಪಘಾತದ ಮರಣ ಪರಿಹಾರ | | ಇತರೆ ಗಾಯಾಳುಗಳು | |
|---|---|---|---|---|
| | ಕಾರ್ಮಿಕರ ಸಂಖ್ಯೆ | ಮೊತ್ತ | ಕಾರ್ಮಿಕರ ಸಂಖ್ಯೆ | ಮೊತ್ತ |
| 2021-22 | 3 | 6,00,000 | - | - |
| 2022-23 | 4 | 11,00,000 | - | - |
| 2023-24 | 5 | 25,00,000 | - | - |
| **ಒಟ್ಟು** | **12** | **42,00,000** | - | - |

ಅಲ್ಲದೆ 6 ನೋಂದಾಯಿತರಲ್ಲದ ಕಟ್ಟಡ ಕಾರ್ಮಿಕರ ಅವಲಂಬಿತರಿಗೆ ಮಂಡಳಿಯಿಂದ ತಲಾ ರೂ.2.00 ಲಕ್ಷದಂತೆ ಒಟ್ಟು ರೂ.12.00 ಲಕ್ಷಗಳನ್ನು ಪರಿಹಾರವಾಗಿ ಬಿಡುಗಡೆ ಮಾಡಲಾಗಿದೆ.

**ಕಾಇ 557 ಎಲ್‌ಇಟಿ 2024**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 674**

## ಅನುಬಂಧ -1

### ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ಸಹಾಯಧನ ನೀಡಲು ಈ ಕೆಳಕಂಡ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ. 3,000/-
2. ಕುಟುಂಬ ಪಿಂಚಣಿ ಸೌಲಭ್ಯ: ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ ರೂ.1500/-
3. ದುರ್ಬಲತೆ ಪಿಂಚಣಿ: ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ ರೂ. 2,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ. 2,00,000/- ದವರೆಗೆ ಅನುಗ್ರಹರಾಶಿ ಸಹಾಯಧನ.
4. ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. ಟ್ರೆನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ
6. ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/- ದವರೆಗೆ ಮುಂಗಡ ಸೌಲಭ್ಯ
7. ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್): ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ. 50,000/-
8. ಅಂತ್ಯಕ್ರಿಯೆ ವೆಚ್ಚ :ರೂ. 4,000/- ಹಾಗೂ ಅನುಗ್ರಹ ರಾಶಿ ರೂ. 71,000/-ಸಹಾಯಧನ
9. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 1 | 1 ರಿಂದ 5 ನೇ ತರಗತಿ | 1,800 |
| 2 | 6 ರಿಂದ 8 ನೇ ತರಗತಿ | 2,400 |
| 3 | 9 ಹಾಗೂ 10ನೇ ತರಗತಿ | 3,000 |
| 4 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 4,600 |
| 5 | ಪದವಿ | 10,000 |
| 6 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | 10,000 |
| 7 | ಸ್ನಾತಕೋತ್ತರ ಪದವಿ | 10,000 |
| 8 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 4,600 |
| 9 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ / ಅಕ್ಸುಲರಿ ನರ್ಸಿಂಗ್ ಆಂಡ್ ಮಿಡ್ವೈಫ್ | 10,000 |
| 10 | ಬಿ.ಎಡ್ | 6,000 |
| 11 | ವೈದ್ಯಕೀಯ (ಎಮ್‌ಬಿಬಿಎಸ್/ಬಿಎಎಮ್ ಎಸ್/ಬಿಡಿಎಸ್ / ಬಿಹೆಚ್‌ಎಮ್ ಎಸ್ ಕೋರ್ಸ್ ಅಥವಾ ಇದಕ್ಕೆ ಸಂಬಂಧ ಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | 11,000 |
| 12 | ಎಲ್‌ಎಲ್ ಬಿ/ಎಲ್ ಎಲ್ ಎಂ | 10,000 |
| 13 | ಎಮ್.ಟೆಕ್/ ಎಮ್ ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | 10,000 |
| 14 | ಎಮ್‌ಡಿ ಮೆಡಿಕಲ್ | 12,000 |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | 11,000 |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಎಸ್‌ಇಆರ್/ ಎಐಐಎಮ್‌ಎಸ್/ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸುಗಳು. | 11,000 |

10. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/-**ವರೆಗೆ
11. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಮರಣ ಹೊಂದಿದ್ದಲ್ಲಿ **ರೂ. 5,00,000/-**ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-**
12. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತಚಿಕಿತ್ಸೆ, ಗರ್ಭಕೋಶ ಶಸ್ತಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔಧ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ**
13. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್)**: ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ.60,000/-**
14. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ